ದುಶ್ಚಟಗಳನ್ನು ತ್ಯಜಿಸಿ ಆರೋಗ್ಯಕರ ಜೀವನಶೈಲಿ ರೂಢಿಸಿಕೊಳ್ಳಬೇಕು : ತೋಂಟದ ಸಿದ್ಧರಾಮ ಶ್ರೀಗಳು

ಗದಗ : ಪ್ರಸ್ತುತ ದಿನಮಾನದ ಆಹಾರ, ಜೀವನಶೈಲಿಯಿಂದ ಆರೋಗ್ಯ ಸಮಸ್ಯೆಗಳು ಹೆಚ್ಚುತ್ತಿವೆ. ಹೃದಯಾಘಾತ, ರಕ್ತದ ಒತ್ತಡ, ಸಕ್ಕರೆ ಖಾಯಿಲೆ ಹೆಚ್ಚಾಗುತ್ತಿರುದಕ್ಕೆ ನಮ್ಮ ಜೀವನಶೈಲಿಯಲ್ಲಿನ ಬದಲಾವಣೆಗಳೇ ಕಾರಣ ಎಂದು ಡಾ. ತೋಂಟದ ಸಿದ್ಧರಾಮ ಶ್ರೀಗಳು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2686ನೆಯ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಪೂಜ್ಯ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಮಾತನಾಡಿ, ದೈಹಿಕ ಶ್ರಮಗಳು ಕಡಿಮೆಯಾಗಿ, ಮಾನಸಿಕ ಒತ್ತಡಗಳು ಹೆಚ್ಚಾಗುತ್ತಿವೆ. ಇತ್ತೀಚೆಗೆ ಮನುಷ್ಯನ ಆಯುಷ್ಯ ಕೂಡ ಬಹಳಷ್ಟು ಕಡಿಮೆಯಾಗುತ್ತಿದೆ. ದುಶ್ಚಟಗಳನ್ನು ತ್ಯಜಿಸಿ ಆರೋಗ್ಯಕರ ಜೀವನಶೈಲಿ ರೂಢಿಸಿಕೊಳ್ಳಬೇಕು ಎಂದು ಶ್ರೀಗಳು ಹೇಳಿದರು.

ಡಾ. ಗಣೇಶ ಕುಂದಾಪೂರ ಹೆಸರಾಂತ ವೈದ್ಯರು ಗದಗ ಅವರು ಉಪನ್ಯಾಸ ನೀಡಿ, ಕ್ಯಾನ್ಸರ್‌ನ್ನು ಮೊದಲನೇ ಹಂತದಲ್ಲಿ ಪತ್ತೆ ಹಚ್ಚಿ ಸೂಕ್ತ ವೈದ್ಯಕೀಯ ಚಿಕಿತ್ಸೆ ಪಡೆಯಬೇಕು. ಕ್ಯಾನ್ಸರ್ ವಾಸಿಯಾಗುವುದು ಖಚಿತ.

ಕ್ಯಾನ್ಸರ್ ರೋಗ ಎಂದ ತಕ್ಷಣ ಭಯಪಡಬಾರದು. ಸಿಗರೇಟ್, ಗುಟಕಾ, ಸೇವನೆಯಿಂದ ಕ್ಯಾನ್ಸರ್‌ಗೆ ಬಹಳಷ್ಟು ಜನ ತುತ್ತಾಗುತ್ತಿದ್ದಾರೆ. ಸಾಧ್ಯವಾದಷ್ಟು ದುಶ್ಚಟಗಳಿಂದ ದೂರವಿರಬೇಕು ಎಂದು ತಿಳಿಸಿದ ಅವರು ಕ್ಯಾನ್ಸರ್ ಕುರಿತು ಅನೇಕ ಮಹತ್ವದ ಸಂಗತಿಗಳನ್ನು ಜನರಿಗೆ ತಿಳಿಸಿಕೊಟ್ಟರು.ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ 'ಕಿತ್ತೂರು ಚೆನ್ನಮ್ಮ' ಪ್ರಶಸ್ತಿ ಪಡೆದ ನಮಿತ್ತ ಶ್ರೀಮತಿ ವಿ. ವಿ. ಹಿರೇಮಠ ಗದಗ ಅವರನ್ನು ಸಂಮಾನಸಲಾಯಿತು. ಶ್ರೀಮತಿ ಲಲಿತಾ ಇಂಗಳಳ್ಳಿ ಅಧ್ಯಕ್ಷರು ಮಹಿಳಾ ಘಟಕ, ತಾಲೂಕಾ ಬಣಜಿಗರ ಸಮಾಜ, ಗದಗ ಮುಖ್ಯಅತಿಥಿಗಳಾಗಿ ಭಾಗವಹಿಸಿದ್ದರು. ಬಣಜಿಗ ಮಹಿಳಾ ಘಟಕದ ಸದಸ್ಯರು ವಚನಸಂಗೀತ ಹಾಡಿದರು. ಧರ್ಮಗ್ರಂಥ ಪಠಣವನ್ನು ಶ್ರೀಮತಿ ಸ್ನೇಹಾ ಬಳ್ಳೊಳ್ಳಿ, ವಚನ ಚಿಂತನೆಯನ್ನು ದೀಪಾ ಸುರೇಶ ನಲೂಗಲ್ ಮಾಡಿದರು. ಶಿವಾನುಭವದ ದಾಸೋಹ ಭಕ್ತಿಸೇವೆಯನ್ನು ವಹಿಸಕೊಂಡಿದ್ದ ಬಸವರಾಜ ರಾಮನಕೊಪ್ಪ ಹಾಗೂ ಬಣಜಿಗ ಮಹಿಳಾ ಸಮಾಜ ತಾಲೂಕಾ ಘಟಕ, ಗದಗ ಮತ್ತು ಉಮೇಶ ಗಂಗಾಧರಪ್ಪ ನಾಲ್ವಾಡ ವ್ಯಾಪಾರೋದ್ಯಮಿಗಳು, ಗದಗ ಅವರನ್ನು ಪೂಜ್ಯರು ಸಂಮಾನಸಿದರು.

ಸರ್ವರನ್ನು ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷರಾದ ಶೇಖಣ್ಣ ಕಳಸಾಪೂರ ಸ್ವಾಗತಿಸಿದರು. ರತ್ನಕ್ಕ ಪಾಟೀಲ ಕಾರ್ಯಕ್ರಮ ನರೂಪಿಸಿದರು. ಉಪಾಧ್ಯಕ್ಷ ಬಾಲಚಂದ್ರ ಭರಮಗೌಡರ, ರೇಣುಕಾ ವಿ. ಕರೇಗೌಡ್ರ, ಕಾರ್ಯದರ್ಶಿ ಮಹೇಶ ಗಾಣಿಗೇರ, ಸಹಕಾರ್ಯದರ್ಶಿ ವಿಜಯಕುಮಾರ ಹಿರೇಮಠ, ವಿರುಪಾಕ್ಷಪ್ಪ ಅರಳಿ, ಸಂಘಟನಾ ಕಾರ್ಯದರ್ಶಿ ಅಶೋಕ ಹಾದಿ, ಕೋಶಾಧ್ಯಕ್ಷ ಸುರೇಶ ನಲೂಗಲ್, ಶಿವಾನುಭವ ಸಮಿತಿ ಚೇರಮನ್‌ರಾದ ವಿವೇಕಾನಂದಗೌಡ ಪಾಟೀಲ ಉಪಸ್ಥಿತರಿದ್ದರು.

ಗದಗ ನಾಲ್ವಾಡ ಓಣಿಯ ಕಾಮರತಿ ಉತ್ಸವ ಮಹಿಳೆಯರಿಗೆ ಉಡಿ ತುಂಬುವ ಕಾರ್ಯಕ್ರಮ

ಗದಗ, ಮಾ. : ಗದುಗಿನ ನಾಲ್ವಾಡದವರ ಓಣಿಯ ಕಾಮರತಿ ಉತ್ಸವವು 99ನೇ ವರ್ಷ ಉತ್ಸವವನ್ನು ಸಡಗರದೊಂದಿಗೆ ಆಚರಿಸಲಾಯಿತು. ಮಂಗಳವಾರ ಉತ್ಸವ ಸಮಿತಿಯು ಮಹಿಳೆಯರಿಗೆ ಉಡಿತುಂಬುವ ಕಾರ್ಯಕ್ರಮವನ್ನು ಏರ್ಪಡಿಸಿತ್ತು. ಸುಮಾರು 800 ಕ್ಕೂ ಹೆಚ್ಚಿನ ಮಹಿಳೆಯರು ಕಾಮರತಿಯ ದರ್ಶನ ಪಡೆದುಕೊಂಡು ತಮ್ಮ ಇಷ್ಟಾರ್ಥ ಸಂಕಲ್ಪಗಳನ್ನು ಮಾಡಿಕೊಂಡರು. ಮಹಿಳೆಯರಿಗೆ ಸಾರ್ವಜನಕರಿಗೆ ಪ್ರಸಾದದ ವ್ಯವಸ್ಥೆಯನ್ನು ಮಾಡಲಾಗಿತ್ತು. ನಾಲ್ವಾಡ ಓಣಿಯ ಗುರು ಹಿರಿಯರು, ಯುವಕರು ಎಲ್ಲ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಿ ಮುಂದಿನ ವರ್ಷ 100ನೇ ವರ್ಷದ ಕಾಮರತಿ ಉತ್ಸವವನ್ನು ಸಂಭ್ರಮ ಸಡಗರದೊಂದಿಗೆ ಸಾಂಸ್ಕೃತಿಕ ಕಾರ್ಯಕ್ರಮಗಳ ಆಚರಿಸಲು ನಿರ್ಧರಿಸಿದರು.

ಕಾಯಾ, ವಾಚಾ, ಮನಸ್ಸಾ ಶುದ್ಧವಾಗಿದ್ದರೆ ದೇವರು ಸದಾ ನಿಮ್ಮನ್ನು ಕಾಯುತ್ತಾನೆ: ಶ್ರೀ ಬಲರಾಮಸಾ ಎಸ್ ಬಸವಾ,

ಗದಗ: ಚಿಕ್ಕಟ್ಟಿ ಪೂರ್ವ ಪ್ರಾಥಮಿಕ ಶಾಲೆಯಲ್ಲಿ ವಿದ್ಯಾರ್ಥಿಗಳ ಪದವಿ ದಿನವನ್ನು ಮುಂಡರಗಿ ರಸ್ತೆಯಲ್ಲಿರುವ ಭಾರತೀಯ ಶಿಕ್ಷಣ ಸಂಸ್ಥೆಯ ಆಡಿಟೋರಿಯಂದಲ್ಲಿ ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದಂತಹ ಬಸವಾ ಸೀಲ್ಕ್ ಹೌಸ್‌ನ ವ್ಯವಸ್ಥಾಪಕ ನರ್ದೇಶಕರಾದ ಶ್ರೀ ಬಲರಾಮಸಾ ಷಣ್ಮುಖಸಾ ಬಸವಾ ಅವರು ಪಾಲಕರು ಹಾಗೂ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡುತ್ತಾ, ಮಕ್ಕಳ ಭವಿಷ್ಯದಲ್ಲಿ ಇದೊಂದು ಬದಲಾವಣೆಯ ಘಟ್ಟವಾಗಿದೆ ಏಕೆಂದರೆ ಯಾವ ಮಗುವಿಗೆ ಪ್ರಶಸ್ತಿ ಬಂದಿರುವುದಿಲ್ಲವೋ ಅಂತಹ ಮಗು ತಾನು ವೇದಿಕೆಯ ಮೇಲೆ ಹೋಗಿ ಅತಿಥಿಗಳಿಂದ ಪ್ರಶಸ್ತಿ ಸ್ವೀಕಾರ ಮಾಡಿಕೊಳ್ಳಬೇಕೆಂಬ ಪ್ರೇರಣೆ ಹುಟ್ಟಿ ಸಾಧನೆಯ ಹಾದಿಯಲ್ಲಿ ತಾನು ಸಾಗಬೇಕೆಂಬ ಛಲ ತಾನಾಗಿಯೇ ಬರುತ್ತದೆ. ಪಾಲಕರ ಈ ಅಮೂಲ್ಯವಾದ ವೇಳೆ ಯಾವುದೇ ಕಾರಣಕ್ಕೂ ವ್ಯರ್ಥವಾಗುವುದಿಲ್ಲ ಏಕೆಂದರೆ ಇಂತಹ ವೇದಿಕೆ ನಮ್ಮ ಮಕ್ಕಳಿಗೆ ಸಿಕ್ಕಿರುವುದು ನಮ್ಮ ಪುಣ್ಯ ಎಂದು ಹೇಳಿದರು.

ಮುಂದುವರೆದು ಮಾತನಾಡುತ್ತಾ ಈ ಸಂಸ್ಥೆಯಲ್ಲಿರುವ ವಾತಾವರಣ ಮತ್ತೆಲ್ಲೂ ಕಾಣಸಿಗದು. ಇದಕ್ಕೆ ಮೂಲ ಕಾರಣ ಚಿಕ್ಕಟ್ಟಿಯವರ ಕಠಿಣ ಪರಿಶ್ರಮ. ಎಲ್ಲ ಮಕ್ಕಳಿಗೂ ಓದಲು ಅನುಕೂಲಕರವಾದ ಪರಿಸರ, ಉತ್ತಮವಾದ ಸೌಲಭ್ಯಗಳನ್ನು ನಮಗೆ ಒದಗಿಸಿಕೊಟ್ಟಿದ್ದಾರೆ ಅದನ್ನು ಸರಿಯಾಗಿ ಸದ್ಬಳಕೆ ಮಾಡಿಕೊಳ್ಳಿ. ಮನುಷ್ಯನಾದವನು "ಕಾಯಾ, ವಾಚಾ, ಮನಸ್ಸಾ ಶುದ್ಧವಾಗಿದ್ದರೆ ದೇವರು ಸದಾ ನಮ್ಮನ್ನು ಕಾಯುತ್ತಾನೆ" ಹಾಗೂ ಆತ್ಮ ಸಂತೃಪ್ತಿ ನಮಗೆ ಸಿಗುತ್ತದೆ ಎಂದು ಹಿತನುಡಿಗಳನ್ನು ಹೇಳಿದರು.ಶ್ರೀ ಬಲರಾಮಸಾ ಬಸವಾ ಮತ್ತು ಅವರ ಧರ್ಮ ಪತ್ನಿಯಾದ ಶ್ರೀಮತಿ ರೇಣುಕಾ ಬಸವಾ ಅವರನ್ನು ಚಿಕ್ಕಟ್ಟಿ ಸಂಸ್ಥೆಯ ವತಿಯಿಂದ ಸನ್ಮಾನಸಲಾಯಿತು ಹಾಗೂ ಎಲ್ಲ ಮುದ್ದು ಮಕ್ಕಳಿಗೂ ಪ್ರಶಸ್ತಿ ಪ್ರಧಾನ ಮಾಡಲಾಯಿತು. ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿದ ಪಾಲಕರಿಗೂ ಸಹ ಪ್ರಶಸ್ತಿ ಪ್ರಧಾನ ಮಾಡಲಾಯಿತು.

ಚಿಕ್ಕಟ್ಟಿ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ಪ್ರೊ.ಎಸ್.ವಾಯ್ ಚಿಕ್ಕಟ್ಟಿ ಗುರುಗಳು ಪ್ರಾಸ್ತಾವಿಕ ನುಡಿಗಳನ್ನಾಡಿದರು. ಕಿತ್ತೂರ ಕರ್ನಾಟಕ ಪ್ರಾದೇಶಿಕ ದಿನ ಪತ್ರಿಕೆಯ ಕುನಾಲ ಕೊಟ್ರೇಶ ಅಬ್ಬಿಗೇರಿ ಯವರು 36 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಬೆಳ್ಳಿಯ ನಾಣ್ಯಗಳನ್ನು ಉಡುಗೊರೆಯಾಗಿ ನೀಡಿದರು. ವಿನಯ್ ಚಿಕ್ಕಟ್ಟಿ ಪಿಯು ಮಹಾವಿದ್ಯಾಲಯದ ಪ್ರಾಂಶುಪಾಲರಾದ ಪ್ರೊ. ವಿನಯ್ ಎಸ್. ಚಿಕ್ಕಟ್ಟಿಯವರು, ವಿನಯ್ ಚಿಕ್ಕಟ್ಟಿ ಐಸಿಎಸ್‌ಇ ಶಾಲೆಯ ಉಪಪ್ರಾಂಶುಪಾಲರಾದ ಶ್ರೀಮತಿ ಶೋಭಾ ಸ್ಥಾವರಮಠರವರು, ಬಿಪಿನ್ ಚಿಕ್ಕಟ್ಟಿ ಆಂಗ್ಲ ಮಾಧ್ಯಮ ಶಾಲೆಯ ಉಪಮುಖ್ಯೋಪಾಧ್ಯಾಯನಿಯರಾದ ಶ್ರೀಮತಿ ರಿಯಾನಾ ಮುಲ್ಲಾ ರವರು, ಚಿಕ್ಕಟ್ಟಿ ಸಂಸ್ಥೆಯ ಪೂರ್ವ ಪ್ರಾಥಮಿಕ ಶಾಲೆಗಳ ಮುಖ್ಯೋಪಾಧ್ಯಾಯನಿಯರಾದ ಶ್ರೀಮತಿ ಶೋಭಾ ಜೆ ಭಟ್ ಹಾಗೂ ಶ್ರೀಮತಿ ಪುಷ್ಪಲತಾ ಎಮ್ ಬೇಲೇರಿ ಸೇರಿದಂತೆ ಸಂಸ್ಥೆಯ ಶಿಕ್ಷಕವೃಂದದವರು, ಪಾಲಕರು-ಪೋಷಕರು, ಮುದ್ದು ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಹೆಸ್ಕಾಂ ಅಧಿಕಾರಿ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಕರವೇ ಕಾರ್ಯಕರ್ತರು ಹಾಗೂ ಗ್ರಾಮಸ್ಥರಿಂದ ಪ್ರತಿಭಟನೆ

ಇಂಡಿ: ತಾಲೂಕಿನ ತಾಂಬಾ ಗ್ರಾಮದ ಹೆಸ್ಕಾಂ ಅಧಿಕಾರಿ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ಪಟ್ಟಣದ ಆಡಳಿತ ಸೌದಧ ಎದುರು ಕರವೇ ಕಾರ್ಯಕರ್ತರು,ತಾಂಬಾ ಮತ್ತು ಸುತ್ತ ಮುತ್ತಲಿನ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು. ಅಲ್ಲಾಬಕ್ಷ ಗಡೆದ (ಗೊರೆ) ಮಾತನಾಡಿ 10 ವರ್ಷಗಳ ಹಿಂದೆ ನಾಲ್ಕು ಜನ ರೈತರಿಗೆ ಟ್ರಾನ್ಸಪಾರ್ಮರ್ ನೀಡಿದ್ದು ಈಗ ಆ ಟಿಸಿ ಗೆ ಮತ್ತೆ ಹೆಚ್ಚಿನ ಕನೆಕ್ಷನ ನೀಡಿದ್ದರಿಂದ ಲೋಡ್ ಹೆಚ್ಚಾಗುತ್ತಿದೆ ಒಂದು ಮೋಟಾರು ನಡೆಯದಂತಹ ಸ್ಥಿತಿ ಸೃಷ್ಟಿಯಾಗಿದೆ. ಹೀಗಾಗಿ ತಾಂಬಾ ಹೆಸ್ಕಾಂ ಅಧಿಕಾರಿ ವಿರುದ್ಧ ಮೇಲಾಧಿಕಾರಿಗಳು ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಅಬ್ದುಲ್ ದಡೇದ, ಮುದಕಪ್ಪ ಕಲ್ಲೂರ, ಹುಚ್ಚಪ್ಪ ಕಾಂಬಳೆ, ಮಾಸೀಮ ಮಂಗಳಖೇಡ, ಸಿದ್ದು ಶಿರಶ್ಯಾಡ, ಮಹಮ್ಮದಸಾಬ ವಾಲಿಕಾರ, ಪರಸು ಬಿಸನಾಳ, ರಿಯಾಜ ಮಂಗಳವೇಡ, ಹಾಜಿ ಗೌಂಡಿ, ಸಿದ್ದಪ್ಪ ಹಿರೇಕುರಬರ, ಇಸಾಕ ಮೋಮೀನ, ಪುಟ್ಟು ಅಳೋಳೀ, ಬೀಜರಿ ಮತ್ತಣ್ಣ, ನಾಗು ಪೂಜಾರಿ ಮತ್ತಿತರಿದ್ದರು. ಶಿರಸ್ತೆದಾರ ಎಸ್.ಆರ್.ಮುಜಗೊಂಡ ಇವರಿಗೆ ಮನವಿ ಸಲ್ಲಿಸಿದರು.ಇದಕ್ಕೂ ಪೂರ್ವ ಹೆಸ್ಕಾಂ ಕಚೇರಿ ತೆರಳಿ ಅಲ್ಲಿಯೂ ಮನವಿ ಸಲ್ಲಿಸಿದರು.

ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಸದಸ್ಯರ ಕ್ರೀಡಾಕೂಟದ ಫಲಿತಾಂಶ

ಗದಗ-28 : ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಸಿದ್ಧಲಿಂಗ ನಗರ ಗದಗ ಇವರು 15 ನೆಯ ವಾರ್ಷಿಕೋತ್ಸವದ ಅಂಗವಾಗಿ ಸದಸ್ಯರಿಗಾಗಿ ಏರ್ಪಡಿಸಿದ ಕ್ರೀಡಾಕೂಟದ ಫಲಿತಾಂಶ ಈ ಕೆಳಗಿನಂತಿದೆ.

1) ವೇಗದ ನಡಿಗೆ : ಪ್ರಥಮ - ಚೈತ್ರಾ ಹದ್ದಣ್ಣವರ, ದ್ವಿತೀಯ - ಸಂಗೀತಾ ಮಡಿವಾಳರ, ತೃತೀಯ - ವೀಣಾ ಮಾಲಿಪಾಟೀಲ.

2) ಲಗೋರಿ ಸ್ಟಾಂಡ ಬೀಳಿಸುವುದು : ಪ್ರಥಮ - ಗೌರಿ ಜೀರಂಕಳಿ, ದ್ವಿತೀಯ - ಜಯಶ್ರೀ ಡಾವಣಗೇರಿ, ತೃತೀಯ - ಸಂಗೀತಾ ಮಡಿವಾಳರ.

3) ಯೋಗಾಸನ : ಪ್ರಥಮ - ಚೈತ್ರಾ ಹದ್ದಣ್ಣವರ, ದ್ವಿತೀಯ - ಸಂಗೀತಾ ಮಡಿವಾಳರ, ತೃತೀಯ - ರಾಜೇಶ್ವರಿ.4) ಯೋಗ ಆಶುಭಾಷಣ : ಪ್ರಥಮ - ಗೌರಿ ಜೀರಂಕಳಿ, ದ್ವಿತೀಯ - ಭಾರತಿ ಪಾಟೀಲ (ಪಲ್ಲೇದ), ತೃತೀಯ - ವಿಜಯಲಕ್ಷ್ಮೀ ಮೇಕಳಿ5) ಪುಟಾಣಿ-ಕಡ್ಲಿಬೇಳೆ ಬೇರ್ಪಡಿಸುವದು : ಪ್ರಥಮ - ಮಹಾದೇವಿ ಚರಂತಿಮಠ, ದ್ವಿತೀಯ - ಲಲಿತಾ ಕಡಗದ, ತೃತೀಯ - ಸಂಗೀತಾ ನಾಕೋಡ.

ಕ್ರೀಡಾಕೂಟದಲ್ಲಿ ಭಾಗವಹಿಸಿದ ಮತ್ತು ವಿಜೇತರಾದ ಸ್ಪರ್ಧಿಗಳೆಲ್ಲರಿಗೂ ಹಾಗೂ ಬಹುಮಾನ ದಾಸೋಹ ಸೇವೆ ಸಲ್ಲಿಸಿದ ಪಾರ್ವತಿ ಭೂಮಾ, ಶಾಂತಾ ಮುಂದಿನಮನ, ಗಿರಿಜಾ ನಾಲತ್ವಾಡಮಠ ಮತ್ತು ಮಾರ್ಗದರ್ಶನ ನೀಡಿದ ಬಸವ ಯೋಗ ಕೇಂದ್ರ ಪ್ರಾಚಾರ್ಯ ಕೆ. ಎಸ್. ಪಲ್ಲೇದ,

ನಿರ್ಣಾಯಕರಾಗಿ ಕಾರ್ಯನಿರ್ವಹಿಸಿದ ದೈಹಿಕ ಶಿಕ್ಷಣ ಶಿಕ್ಷಕರಾದ ಎಸ್. ಎಂ. ಬುರಡಿ ಇವರೆಲ್ಲರಿಗೂ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ಜಯಶ್ರೀ ವಸ್ತ್ರದ ಹಾಗೂ ಪದಾಧಿಕಾರಿಗಳು ಅಭಿನಂದನೆಗಳನ್ನು ತಿಳಿಸಿರುವರು.

ಘಣೇಂದ್ರಾಚಾರ್ಯರಿಗೆ 'ಚಿನ್ಮಯ ಕಲಾಶ್ರೀ' ಪ್ರಶಸ್ತಿ ಪ್ರದಾನ ರಂಗಭೂಮಿ ದಿನಾಚರಣೆ ಕೇವಲ ಔಪಚಾರಿಕತೆ ಪಡೆದುಕೊಳ್ಳದಿರಲಿ: ಡಾ. ಜಿ. ಬಿ. ಪಾಟೀಲ

ಗದಗ, : ಬದುಕಿನ ಮೌಲ್ಯಗಳನ್ನು ತಿಳಿಸಿಕೊಡುವಲ್ಲಿ ಮಾರ್ಗದರ್ಶಿಸವಲ್ಲಿ ರಂಗಕಲೆ ಅತ್ಯಂತ ಪರಿಣಾಮಕಾರಿ ಮಾಧ್ಯಮವಾಗಿದ್ದು, ಅದು ಸದಾ ಕ್ರೀಯಾಶೀಲವಾಗಿರಬೇಕು. ರಂಗಭೂಮಿ ದಿನಾಚರಣೆ ಕೇವಲ ಔಪಚಾರಿಕತೆ ಪಡೆದುಕೊಳ್ಳದಿರಲಿ ಎಂದು ಡಿಜಿಎಮ್ ಆಯುರ್ವೇದ ಮಹಾವಿದ್ಯಾಲಯದ ನಿರ್ವತ್ತ ಪ್ರಾಂಶುಪಾಲರು ಹಾಗೂ ಸಾಂಸ್ಕೃತಿಕ ಸಂಘಟಕರಾದ ಡಾ. ಜಿ. ಬಿ. ಪಾಟೀಲ ಅಭಿಪ್ರಾಯಪಟ್ಟರು. ಅವರು ನಗರದ ಕಬ್ಬಿಗರ ಕೂಟದ ಸಾಹಿತ್ಯ ಭವನದಲ್ಲಿ ಚಿನ್ಮಯ ಸಾಂಸ್ಕೃತಿಕ ಅಕಾಡೆಮಿ ವತಿಯಿಂದ ಹಮ್ಮಿಕೊಳ್ಳಲಾಗಿದ್ದ, 'ವಿಶ್ವ ರಂಗಭೂಮಿ ದಿನಾಚರಣೆ-2024' ಕಾರ್ಯಕ್ರಮದಲ್ಲಿ ಹಿರಿಯ ರಂಗಕರ್ಮಿ ಘಣೇಂದ್ರಾಚಾರ್ಯ ದ್ಯಾಮೇನಹಳ್ಳಿ ಅವರಿಗೆ 'ಚಿನ್ಮಯ ಕಲಾಶ್ರೀ' ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿ, ರಂಗಕಲೆಯನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಚಟುವಟಿಕೆಗಳನ್ನು ಹಮ್ಮಿಕೊಳ್ಳುತ್ತ ನಾವೆಲ್ಲ ತೊಡಗಿಸಿಕೊಂಡಾಗ ಮಾತ್ರ ರಂಗಭೂಮಿ ದಿನಾಚರಣೆಗೆ ನೈಜ ಅರ್ಥಬರಲು ಸಾಧ್ಯ ಎಂದರು.

ಉಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ, ಕಬ್ಬಿಗರ ಕೂಟದ ಸಂಸ್ಥಾಪಕರು ಹಾಗೂ ಹಿರಿಯ ಸಾಹಿತಿಗಳಾದ ಡಿ. ವಿ. ಬಡಿಗೇರ ಮಾತನಾಡಿ, ಗದಗ ಜಿಲ್ಲೆ ಅದರಲ್ಲೂ ವಿಶೇಷವಾಗಿ ಶಹಪೂರಪೇಟೆ ರಂಗಭೂಮಿಗೆ ವೈಶಿಷ್ಟಪೂರ್ಣ ಕೊಡುಗೆ ನೀಡಿದೆ. ಇಂತಹ ನಗರದಲ್ಲಿ ರಂಗ ಚಟುವಟಿಕೆಗಳು ಹೆಚ್ಚು ಹೆಚ್ಚಾಗಿ ನಡೆಯಬೇಕು. ಅಂತಹ ಕಾರ್ಯಗಳಿಗೆ ಕಬ್ಬಿಗರ ಕೂಟದ ಸಭಾಭವನ ಸದಾ ಸಹಕಾರ ನೀಡಲಿದೆ ಎಂದು ತಿಳಿಸಿದರು.'ಚಿನ್ಮಯ ಕಲಾಶ್ರೀ' ಪ್ರಶಸಿ ಸ್ವೀಕರಿಸಿದ ಘಣೇಂದ್ರಾಚಾರ್ಯ ದ್ಯಾಮೇನಹಳ್ಳಿ ಅವರು ಮಾತನಾಡಿ, ಶ್ರೀರಾಘವೇಂದ್ರ ಸೇವಾ ಸಮಿತಿ ಹಾಗೂ ಆರ್‌ಎನ್‌ಕೆ ಮಿತ್ರಮಂಡಳಿಗಳು ಕಳೆದ ಎರಡು ದಶಕಗಳಿಂದ ನನ್ನ ರಂಗ ಚಟುವಟಿಕೆಗಳಿಗೆ ಬೆನ್ನೆಲುಬಾಗಿ ನಿಂತದ್ದು ಸ್ಮರಣಾರ್ಹ. ಪರಸ್ಪರರಲ್ಲಿ ವಿಶ್ವಾಸಾರ್ಹತೆ, ಶಾಂತಿ ನೆಮ್ಮದಿ ನೀಡುವಲ್ಲಲಿ ಸಾಂಸ್ಕೃತಿಕ ಕಾರ್ಯಕ್ರಮಗಳ ಪಾತ್ರ ಮಹತ್ವದ್ದು, ಇಂದಿನ ಮಕ್ಕಳು ಮೊಬೈಲ್ ಗೀಳು ಬದಿಗಿಟ್ಟು, ಸಾಂಸ್ಕೃತಿಕ ಚಟುವಟಿಕೆಗಳಿಗೆ ಹೆಚ್ಚು ಸಮಯ ನೀಡಬೇಕು. ರಂಗಕಲೆ ಮನುಷ್ಯನ ಸರ್ವಾಂಗೀಣ ವ್ಯಕ್ತಿತ್ವ ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಹೇಳಿದರು.

ಅಧ್ಯಕ್ಷತೆವಹಿಸಿದ್ದ ಚಿನ್ಮಯ ಸಾಂಸ್ಕೃತಿಕ ಅಕಾಡೆಮಿ ಗೌರವ ಅಧ್ಯಕ್ಷರಾದ ಪ್ರೊ. ಎಮ್. ಎಸ್. ಕುಲಕರ್ಣಿ ಅಧ್ಯಕ್ಷೀಯ ನುಡಿಗಳಾಡಿದರು.

ಹಿರಿಯ ರಂಗ ಸಾಧಕರಾದ ಘಣೇಂದ್ರಾಚಾರ್ಯ ದ್ಯಾಮೇನಹಳ್ಳಿ ಅವರಿಗೆ 'ಚಿನ್ಮಯ ಕಲಾಶ್ರೀ' ಪ್ರಶಸ್ತಿ ಪ್ರದಾನ ಮಾಡಲಾಯಿತು. ಕರ್ನಾಟಕ ಜಾನಪದ ಅಕಾಡೆಮಿಗೆ ಸದಸ್ಯರಾಗಿ ನೇಮಕ ಹೊಂದಿರುವ ಜಿಲ್ಲೆಯ ಹಿರಿಯ ಜಾನಪದ ಕಲಾವಿದರಾದ ಶಂಕರಣ್ಣ ಸಂಕಣ್ಣವರ ಹಾಗೂ ಕರ್ನಾಟಕ ಬಂಜಾರ ಅಕಾಡೆಮಿಗೆ ಸದಸ್ಯರಾಗಿ ನೇಮಕಗೊಂಡ ಜಾನಪದ ಕಲಾವಿದೆ ಶ್ರೀಮತಿ ಸಾವಿತ್ರಿಬಾಯಿ ಲಮಾಣಿ ಅವರನ್ನು ಸನ್ಮಾನಸಲಾಯಿತು.ರೋಣ ತಾಲೂಕಿನ ಹುಲ್ಲೂರ ಗ್ರಾಮದ ಕಲಾವಿದರಾದ ರಾಮಕೃಷ್ಣ ಪೂಜಾರ ಮತ್ತು ತಂಡದವರು ರಂಗ ಗೀತೆಗಳನ್ನು ಪ್ರಸ್ತುತಪಡಿಸಿದರು.

ರಾಮಕೃಷ್ಣ ಪೂಜಾರ ಪ್ರಾರ್ಥಿಸಿದರು. ಚಿನ್ಮಯ ಸಾಂಸ್ಕೃತಿಕ ಅಕಾಡೆಮಿ ಅಧ್ಯಕ್ಷ ಮೌನೇಶ ಸಿ. ಬಡಿಗೇರ(ನರೇಗಲ್ಲ) ಸ್ವಾಗತಿಸಿ ಪ್ರಾಸ್